ಪ್ರಧಾನ ಸಿವಿಲ್ ಮತ್ತು ಜೆಎಮ್‌ಎಫ್ ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

ಸಿಸಿ ನಂ.**349/2018**

ಪಿರ್ಯಾದಿ : ಶ್ರೀ ಶಂಕರ ಎಸ್. ಕಲಾಲ್ ತಂದೆ ಸವರಪ್ಪ,
ವಯಸ್ಸುಃ 38 ವರ್ಷ, ಉಃ ಒಕ್ಕಲುತನ ಮತ್ತು ವ್ಯಾಪಾರ,
ಸಾಃ ಯಲಸತ್ತಿ ಗ್ರಾಮ, ತಾಃ ಗುರುಮಠಕಲ್, ಜಿಃ ಯಾದಗಿರಿ.

ಆರೋಪಿ : ಶ್ರೀ ನಾಗರಾಜ ತಂದೆ ಶಂಕ್ರಪ್ಪ ವಜ್ಜಲ,
ವಃ 36 ವರ್ಷ, ಉಃ ಒಕ್ಕಲುತನ ಮತ್ತು ವ್ಯಾಪಾರ,
ಸಾಃ ಕಬ್ಬರಗಿ ಗ್ರಾಮ, ತಾಃ ಕುಷ್ಟಗಿ, ಜಿಃ ಕೊಪ್ಪಳ.

ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಲಂ **351** ರ ಅಡಿಯಲ್ಲಿ ಆರೋಪಿತನ ಹೇಳಿಕ

ಪ್ರಶ್ನೆಃ1ಃ ನೀವು ದೂರುದಾರರ ವಿಚಾರಣೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ2 : ಪ್ರಾಸಾ-1 ಶ್ರೀ ಶಂಕರ ಎಸ್. ಕಲಾಲ್ ತಂದೆ ಸವರಪ್ಪ ಇವರು ಪಿರ್ಯಾದಿದಾರರಾಗಿದ್ದು, ತಮ್ಮ ಮುಖ್ಯ ವಿಚಾರಣೆಯಲ್ಲಿ ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ರೂ.1**,00,000/-**ನಗದು ಹಣವನ್ನು ದೂರದಾರದಿಂದ ಸಾಲವಾಗಿ ಪಡೆದುಕೊಂಡು ದಿನಾಂಕ **15.11.2017** ರ ಒಳಗಾಗಿ ಹಣ ಮರುಪಾವತಿ ಮಾಡುವುದಾಗಿ ತಿಳಿಸಿ ದೂರುದಾರರಿಗೆ ನೀವು ಖಾತೆ ಹೊಂದಿರುವ ಎಸ್.ಬಿ.ಐ ಬ್ಯಾಂಕ್, ಹುಲಿಗೇರಿ ಶಾಖೆಗೆ ಸೇರಿದ **305373** ಸಂಖ್ಯೆಯ ಚೆಕ್ಕುನಲ್ಲಿ ರೂ**.1,00,000/-** ಹಾಗೂ ದಿನಾಂಕ **13.12.2017** ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆಃ 3 ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಆದರೆ ಆಪಾದಿತನಾದ ನೀವು ಹಣವನ್ನು ಮರುಪಾವತಿಸದೆ ಇರುವ ಕಾರಣ ನೀವು ಹೇಳಿದಂತೆ ನಿಮ್ಮ ಖಾತೆಯ ಸದರಿ ಚಕ್ಕುನ್ನು ದೂರುದಾರರು ದಿನಾಂಕ **12.02.2018** ರಂದು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಎಸ್.ಬಿ.ಐ ಬ್ಯಾಂಕ್, ಯಾದಗಿರಿ ಶಾಖೆಯಲ್ಲಿ ಹಾಜರು ಪಡಿಸಿದಾಗ "Funds Insufficient" ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ಅದೇ ದಿನ ವಾಪಸ್ಸು ನೀಡಿರುತ್ತಾರೆ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 4ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ನಂತರ ದೂರುದಾರರು ತಮ್ಮ ವಕೀಲರ ಮೂಲಕ ದಿನಾಂಕ **27.02.2018** ರಂದು ಆಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ನ್ನು ನೀವು ತಿರಸ್ಕರಿಸಿರುತ್ತೀರಿ. ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138 ರಡಿ ಅಪರಾಧ ಎಸಗಿದ್ದೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ **5**ಃ ಈ ಪ್ರಕರಣದ ಬಗ್ಗೆ ನೀವು ಏನಾದರೂ ಹೇಳಲು ಇಚ್ಛಿಸುತ್ತೀರಾ?

ಆರೋಪಿಯ ಉತ್ತರಃ

ಪ್ರಶ್ನೆ **6** ಃ ನಿಮ್ಮ ಪರ ಯವುದಾದರೂ ಸಾಕ್ಷಿಯನ್ನು ವಿಚಾರಣೆ ಮಾಡುತ್ತೀರಾ?

ಆರೋಪಿಯ ಉತ್ತರಃ

(ಮೇಲ್ಕಂಡಂತೆ ಆಪಾದಿತರಿಗೆ ತಿಳಿದ ಭಾಷಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಪ್ರಶ್ನಿಸಿ, ಅವರು ನೀಡಿದ ಹೇಳಿಕೆಯನ್ನು ಪಡೆದುಕೊಳ್ಳಲಾಯಿತು.)

ದಿನಾಂಕಃ 04.07.2026
ಸ್ಥಳಃ ಯಾದಗಿರಿ

ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ ಸಿ
ನ್ಯಾಯಾಧೀಶರು,ಯಾದಗಿರಿ.